## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಮಧುಗಿರಿ ತಾಲ್ಲೂಕು ಪಂಚಾಯಿತಿಯ ಹಿಂದಿನ ಕಾರ್ಯನಿರ್ವಾಹಕ ಅಧಿಕಾರಿಗಳಾದ ಶ್ರೀ ಮಹಾಲಿಂಗಯ್ಯ ಮತ್ತು ಶ್ರೀ ಟಿ.ಎಲ್.ಲೋಕೇಶ ಇವರ ವಿರುದ್ಧದ ಜಂಟಿ ಇಲಾಖಾ ವಿಚಾರಣೆ ಜರುಗಿಸಲು ಮಂಡನಾಧಿಕಾರಿಗಳ ಬದಲಾವಣೆ ಮಾಡುವ ಬಗ್ಗೆ.

ಓದಲಾಗಿದೆ: 1. ಸರ್ಕಾರದ ಆದೇಶ ಸಂಖ್ಯೆ:ಗ್ರಾಅಪ/149/ವಿಸೇಬಿ/2014,ದಿ:06-08-2016.

2. ಆಯುಕ್ತರು ಸಮಾಜ ಕಲ್ಯಾಣ ಇಲಾಖೆ ರವರ ಪತ್ರ ಸಂ:ಸಕನಿ/ಸಿಬ್ಬಂದಿ 2/ ಸಿಆರ್-30/2-12-13, ದಿ:21-9-2016

-000-

ಪ್ರಸ್ತಾವನೆ:

2011-12ನೇ ಸಾಲಿನಲ್ಲಿ ತಾಲ್ಲೂಕು ಸಮಾಜ ಕಲ್ಯಾಣಾಧಿಕಾರಿಗಳ ಕಛೇರಿ, ಮಧುಗಿರಿ ಇಲ್ಲಿ ಬಿಡುಗಡೆಯಾದ ಅನುದಾನಕ್ಕಿಂತ ಹೆಚ್ಚುವರಿಯಾಗಿ ತಾಲ್ಲೂಕು ಪಂಚಾಯತಿ ಲೆಕ್ಕ ಶೀರ್ಷಿಕೆಯಡಿ ನಿಯಮಬಾಹಿರವಾಗಿ ಡ್ರಾ ಮಾಡಿ ದುರುಪಯೋಗಪಡಿಸಿಕೊಂಡಿರುವ ಎನ್ನಲಾದ ಪ್ರಕರಣದಲ್ಲಿ ಭಾಗಿಯಾಗಿರುವ ಮಧುಗಿರಿ ತಾಲ್ಲೂಕು ಪಂಚಾಯತಿಯ ಹಿಂದಿನ ಕಾರ್ಯನಿರ್ವಾಹಕ ಅಧಿಕಾರಿಗಳಾದ ಶ್ರೀ ಮಹಾಲಿಂಗಯ್ಯ ಮತ್ತು ಶ್ರೀ ಟಿ.ಎಲ್.ಲೋಕೇಶ ಇವರುಗಳ ವಿರುದ್ಧದ ಆರೋಪಗಳ ಸತ್ಯಾಸತ್ಯತೆಯನ್ನು ತಿಳಿಯಲು ಜಂಟಿ ಇಲಾಖಾ ವಿಚಾರಣೆ ಜರುಗಿಸಲು, ಸರ್ಕಾರವು ಶ್ರೀ ನಾಗೇಶ್, ಜಂಟಿ ನಿರ್ದೇಶಕರು, ಇವರನ್ನು ಮೇಲೆ ಓದಲಾದ ಕ್ರಮ ಸಂಖ್ಯೆ (1)ರ ಆದೇಶದಲ್ಲಿ ಮಂಡನಾಧಿಕಾರಿಯನ್ನಾಗಿ ನೇಮಿಸಲಾಗಿತ್ತು.

ಮೇಲೆ ಓದಲಾದ ಕ್ರಮ ಸಂಖ್ಯೆ (2) ರ ಪತ್ರದಲ್ಲಿ ಶ್ರೀ ನಾಗೇಶ್, ಜಂಟಿ ನಿರ್ದೇಶಕರು, ಇವರು ಪ್ರಕರಣದಲ್ಲಿ ಸಾಕ್ಷಿದಾರರಾಗಿರುವುದರಿಂದ ಇವರನ್ನು ಮಂಡನಾಧಿಕಾರಿಯನ್ನಾಗಿ ನೇಮಿಸಿರುವುದನ್ನು ಮಾರ್ಪಡಿಸಲು ಕೋರಿರುತ್ತಾರೆ. ಆದುದರಿಂದ ಶ್ರೀ ದೇವರಾಜ್, ಜಿಲ್ಲಾ ಸಮಾಜ ಕಲ್ಯಾಣಾಧಿಕಾರಿ, ತುಮಕೂರು ಇವರನ್ನು ಮಂಡನಾಧಿಕಾರಿಯಾಗಿ ನೇಮಿಸಲು ಸರ್ಕಾರವು ನಿರ್ಧರಿಸಿ ಈ ಮುಂದಿನಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 149 ವಿಸೇಬಿ 2014,ಬೆಂಗಳೂರು, ದಿನಾಂಕ:19-08-2017**

ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳಿಂದ 2011-12ನೇ ಸಾಲಿನಲ್ಲಿ ತಾಲ್ಲೂಕು ಸಮಾಜ ಕಲ್ಯಾಣಾಧಿಕಾರಿಗಳ ಕಛೇರಿ, ಮಧುಗಿರಿ ಇಲ್ಲಿ ಬಿಡುಗಡೆಯಾದ ಅನುದಾನಕ್ಕಿಂತ ಹೆಚ್ಚುವರಿಯಾಗಿ ತಾಲ್ಲೂಕು ಪಂಚಾಯತಿ ಲೆಕ್ಕ ಶೀರ್ಷಿಕೆಯಡಿ ನಿಯಮಬಾಹಿರವಾಗಿ ಡ್ರಾ ಮಾಡಿ ದುರುಪಯೋಗ ಪಡಿಸಿಕೊಂಡಿರುವ ಪ್ರಕರಣದಲ್ಲಿ ಭಾಗಿಯಾಗಿರುವ ಅಧಿಕಾರಿ / ನೌಕರರುಗಳ ವಿರುದ್ಧದ ಜಂಟಿ ಇಲಾಖಾ ವಿಚಾರಣೆ ಜರುಗಿಸಲು ಪ್ರಕರಣದಲ್ಲಿ, ವಿಚಾರಣಾಧಿಕಾರಿಗಳ ಮುಂದೆ ಪ್ರಕರಣವನ್ನು ಮಂಡಿಸಲು ಹಿಂದೆ ನೇಮಿಸಿದ ಶ್ರೀ ನಾಗೇಶ್, ಜಂಟಿ ನಿರ್ದೇಶಕರು, ರವರ ಬದಲಾಗಿ ಶ್ರೀ ದೇವರಾಜ್, ಜಿಲ್ಲಾ ಸಮಾಜ ಕಲ್ಯಾಣಾಧಿಕಾರಿ, ತುಮಕೂರು ಇವರನ್ನು ಮಂಡನಾಧಿಕಾರಿಯಾಗಿ ತಕ್ಷಣದಿಂದ ಜಾರಿಗೆ ಬರುವಂತೆ ನೇಮಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

19/8/17

(ಡಿ.ಎಸ್. ವಿಜಯ್)
ಸರ್ಕಾರದ ಅಧೀನ ಕಾರ್ಯದರ್ಶಿ (ಸೇ. ಬಿ&ಸಿ),
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.

ಗೆ:

1. ಮಹಾಲೇಖಪಾಲರು,(ಎ & ಇ)) ಕರ್ನಾಟಕ, ಬೆಂಗಳೂರು.
2. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತಿ, ತುಮಕೂರು

3. ಶ್ರೀ ಎಂ.ಜಿ.ಹಿರೇಮಠ, ನಿವೃತ್ತ ಜಿಲ್ಲಾ ನ್ಯಾಯಾಧೀಶರು, ಮತ್ತು ವಿಚಾರಣಾಧಿಕಾರಿಗಳು, ಮನೆ ನಂ.746, 15ನೇ ಕ್ರಾಸ್, ಜುಡಿಷಿಯಲ್ ಲೇಔಟ್, ಅಲ್ಲಾಳ ಸಂದ್ರ, ಜಿ.ಕೆ.ವಿ.ಕೆ. ಅಂಚೆ ಬೆಂಗಳೂರು –560065.
4. ಆಯುಕ್ತರು, ಸಮಾಜ ಕಲ್ಯಾಣ ಇಲಾಖೆ, 5ನೇ ಮಹಡಿ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
5. ಶ್ರೀ ದೇವರಾಜ್, ಜಿಲ್ಲಾ ಸಮಾಜ ಕಲ್ಯಾಣಾಧಿಕಾರಿ, ತುಮಕೂರು (ಮಂಡನಾಧಿಕಾರಿ)
6. ಶ್ರೀ ನಾಗೇಶ್, ಜಂಟಿ ನಿರ್ದೇಶಕರು, (ಮೂಲಭೂತ ಸೌಲಭ್ಯ) ಸಮಾಜ ಕಲ್ಯಾಣ ಇಲಾಖೆ ಬಹುಮಹಡಿಗಳ ಕಟ್ಟಡ, ಬೆಂಗಳೂರು.
7. ಆಪಾದಿತ ಅಧಿಕಾರಿ/ನೌಕರರುಗಳಿಗೆ (ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತಿ, ತುಮಕೂರು – ಇವರ ಮುಖಾಂತರ)

ಪ್ರತಿಯನ್ನು:

1. ಸರ್ಕಾರದ ಪ್ರಧಾನ ಕಾರ್ಯದರ್ಶಿ/ಪ್ರಧಾನ ಕಾರ್ಯದರ್ಶಿ(ಪಂ.ರಾಜ್)/ಜಂಟಿಕಾರ್ಯದರ್ಶಿ (ಆಡಳಿತ), ಗ್ರಾ.ಅ.&ಪಂ.ರಾಜ್ ಇಲಾಖೆ, ಇವರ ಆಪ್ತ ಶಾಖೆಗೆ.
2. ವಿಶೇಷಾಧಿಕಾರಿ, ಗಣಕ ಕೋಶ, ಗ್ರಾ.ಅ.ಪಂ.ರಾಜ್ ಇಲಾಖೆ.
3. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿ.